ದಿನಾಂಕ: 07.09.2022 ರಂದು ಬೆಳಗ್ಗೆ 10.30 ಗಂಟೆಗೆ ಕಾಮಾಕ್ಷಿಪಾಳ್ಯ ವಾರ್ಡ್ ನಂ.145 [101] ರಲ್ಲಿ, ಶ್ರೀಮತಿ ಡಾ: ಕಲಾವತಿದೇವಿ.ಎ.ಎಲ್. ನೋಡಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡುವಳಿಗಳ ವಿವರ:-

ಹಾಜರಿದ್ದ ಪಾಲಿಕೆಯ ಅಧಿಕಾರಿಗಳು ಹಾಗೂ ವಾರ್ಡ್ ಕಮಿಟಿ ಸದಸ್ಯರು:-

1. ಶ್ರೀಮತಿ ಡಾ: ಕಲಾವತಿದೇವಿ.ಎ.ಎಲ್. ನೋಡಲ್ ಅಧಿಕಾರಿಗಳು
2. ಶ್ರೀ ಶ್ರೀನಿವಾಸರಾಜು.ಟಿ ಸಹಾಯಕ ಅಭಿಯಂತರರು, ವಾರ್ಡ್ ನಂ. 101 ಕಾಮಾಕ್ಷಿಪಾಳ್ಯ
3. ಶ್ರೀ ವೆಂಕಟೇಶ್, ಬಿಲ್ ಕಲೆಕ್ಟರ್
4. ಶ್ರೀಮತಿ ಸ್ಮಿತಾ, ಕಂದಾಯ ಪರಿವೀಕ್ಷಕರು
5. ಶ್ರೀ ಚಂದ್ರಪ್ಪ, ಕಂದಾಯ ಮೌಲ್ಯ ಮಾಪಕರು
6. ಶ್ರೀಮತಿ ರೂಪ. ಕಿರಿಯ ಆರೋಗ್ಯ ಪರಿವೀಕ್ಷಕರು
7. ಶ್ರೀಮತಿ ರಾಜೇಶ್ವರಿ. ಹಿರಿಯ ಆರೋಗ್ಯ ಪರಿವೀಕ್ಷಕರು
8. ಸಹಾಯಕ ಅಭಿಯಂತರರು, ಬೆಸ್ಕಾಂ
9. ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ.
10. ಸಾರ್ವಜನಿಕರು

ದಿನಾಂಕ: 07.09.2022 ಬೆಳಗ್ಗೆ 10.30 ಗಂಟೆಗೆ ವಾರ್ಡ್ ನಂ. 101 ಕಾಮಾಕ್ಷಿಪಾಳ್ಯ ಎಸ್.ಬಿ.ಐ. ಆಫೀಸರ್ಸ್ ಸಮುಧಾಯ ಭವನ, ಎಸ್.ಬಿ.ಐ. ಕಾಲೋನಿ, ಬಸವೇಶ್ವರನಗರ, ಕಾಮಾಕ್ಷಿಪಾಳ್ಯ ಇಲ್ಲಿ ಪಾಲಿಕೆ ಅಧಿಕಾರಿಗಳೊಂದಿಗೆ ಸಭೆಯನ್ನು ಕೈಗೊಂಡು ಈ ಕೆಳಗಿನ ವಿಷಯಗಳನ್ನು ಚರ್ಚಿಸಲಾಯಿತು.

1. ವಾರ್ಡ್ ವ್ಯಾಪ್ತಿಯಲ್ಲಿ ಈ ಹಿಂದೆ ಬಾರಿ ಮಳೆ ಸುರಿದ ಹಿನ್ನಲೆಯಲ್ಲಿ ಮನೆಗಳಿಗೆ ನೀರು ನುಗ್ಗಿರುವ ಸಂಬಂಧ ಪರಿಹಾರ ನೀಡುವ ಕಡತ ಬಗ್ಗೆ ಸಭೆಯಲ್ಲಿ ಪ್ರಸ್ತಾಪಿಸಲಾಯಿತು. ಇದಕ್ಕೆ ಶ್ರೀಮತು ಸ್ಮಿತಾ, ಕಂದಾಯ ನಿರೀಕ್ಷಕರು ರವರು ಮಾತನಾಡಿ ಪರಿಹಾರ ನೀಡುವ ಸಲುವಾಗಿ ಸಂತ್ರಸ್ಥರ ಬ್ಯಾಂಕ್ ಖಾತೆಗೆ ಆಧಾರ್ ಲಿಂಕ್ ಮಾಡಬೇಕಾಗಿದ್ದು, ಇನ್ನು ಹಲವರ ಆಧಾರ್ ಸಂಖ್ಯೆ ಲಭ್ಯವಿಲ್ಲದ ಕಾರಣ ತಡವಾಗಿರುತ್ತದೆ. ಈ ಬಗ್ಗೆ ಶೀಘ್ರದಲ್ಲಿ ಕ್ರಮ ವಹಿಸುವುದಾಗಿ ತಿಳಿಸಿದರು.

[ಕ್ರಮ: ಸಹಾಯಕ ಕಂದಾಯ ಅಧಿಕಾರಿಗಳು, ರಾಜಾಜಿನಗರ]

2. ವಾರ್ಡ್ ವ್ಯಾಪ್ತಿಯ ಸತ್ಯನಾರಾಯಣ ರಸ್ತೆಯಲ್ಲಿರುವ ಕೊಳವೆ ಬಾವಿ ದುರಸ್ಥಿಯಲ್ಲಿರುವುದಾಗಿ ಈ ಬಗ್ಗೆ ಸಭೆಯಲ್ಲಿ ಶ್ರೀ ಉಮೇಶ್ ರವರು ಪ್ರಸ್ತಾಪಿಸಿರುತ್ತಾರೆ. ಇದಕ್ಕೆ ಉತ್ತರವಾಗಿ ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ. ಅಧಿಕಾರಿ ರವರು ಮಾತನಾಡಿ ವಾರ್ಡ್ ವ್ಯಾಪ್ತಿಯ ಕೊಳವೆ ಬಾವಿಗಳನ್ನು ಬಿ.ಡಬ್ಲ್ಯೂ.ಎಸ್.ಎಸ್.ಬಿ. ವತಿಯಿಂದಲೇ ನಿರ್ವಹಣೆ ಮಾಡುತ್ತಿದ್ದು, ಈ ಬಗ್ಗೆ ಶೀಘ್ರದಲ್ಲಿ ಕ್ರಮ ವಹಿಸುವುದಾಗಿ ತಿಳಿಸಿದರು.

[ಕ್ರಮ: ಎಇ/ಎಇಇ, ಬಿ.ಡಬ್ಲ್ಯೂ.ಎಸ್.ಎಸ್.ಬಿ.]

ಪು.ತಿ.ನೋ.

Scanned by CamScanner

3 ಕಾಮಾಕ್ಷಿಪಾಳ್ಯ ವ್ಯಾಪ್ತಿಯಲ್ಲಿ ಬರುವ ಗಾಡಿ ಮುದ್ದಣ ರಸ್ತೆಯಲ್ಲಿ ರಸ್ತೆ ಗುಂಡಿಗಳು ಬಿದ್ದಿರುವುದಾಗಿ ಸಭೆಯಲಿ ಪ್ರಸ್ತಪಿಸಿರುತ್ತಾರೆ. ಈ ಬಗ್ಗೆ ವಾರ್ಡ್ ಸಹಾಯಕ ಅಭಿಯಂತರರು ಮಾತನಾಡಿ ಈಗಾಗಲೇ ರಸ್ತೆ ಗುಂಡಿ ಮುಚ್ಚುವ ಕೆಲಸ ಮುಗಿದಿದ್ದು, ಗಾಡಿ ಮುದ್ದಣ ರಸ್ತೆಯಲ್ಲಿ ಹೊಸದಾಗಿ ಉಂಟಾಗಿರುವ ರಸ್ತೆ ಗುಂಡಿಗಳ ಮುಚ್ಚುವ ಕೆಲಸವನ್ನು ಮಳೆ ನಿಂತ ತಕ್ಷಣ ಮುಚ್ಚಲು ಕ್ರಮ ವಹಿಸಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

[ಕ್ರಮ: ಎಇ/ಎಇಇ, 145/ಕಾಮಾಕ್ಷಿಪಾಳ್ಯ]

4. ಎಸ್.ಬಿ.ಐ. ಉಧ್ಯಾನವನಕ್ಕೆ ಹೊಂದಿಕೊಂಡಿರುವಂತಹ ಬಿ.ಬಿ.ಎಂ.ಪಿ.ಯ ಕಛೇರಿಗಳಿಗೆ ಪ್ರತ್ಯೇಕವಾಗಿ ಮಹಿಳಾ ಮತ್ತು ಪುರುಷರ ಶೌಚಾಲಯ ಇಲ್ಲದೇ ಇರುವ ಬಗ್ಗೆ ಕಂದಾಯ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿ ಪ್ರಸ್ತಾಪಿಸಿದರು. ಇದಕ್ಕೆ ಉತ್ತರವಾಗಿ ಹಾಲಿ ಇರುವಂತಹ ಶೌಚಾಲಯವನ್ನು ಬಿ.ಬಿ.ಎಂ.ಪಿ. ಅಧಿಕಾರಿಗಳು ಮತ್ತು ಸಾರ್ವಜನಿಕರು ಉಪಯೋಗಿಸುತ್ತಿದ್ದು, ಪ್ರತ್ಯೇಕ ಶೌಚಾಲಯ ನಿರ್ಮಿಸುವ ಸಂಬಂಧ ಪ್ರಸ್ತಾವನೆಯನ್ನು ಸಲ್ಲಿಸುವುದಾಗಿ ವಾರ್ಡ್ ಅಭಿಯಂತರರು ತಿಳಿಸಿರುತ್ತಾರೆ.

[ಕ್ರಮ: ಎಇ/ಎಇಇ, 145/ಕಾಮಾಕ್ಷಿಪಾಳ್ಯ]

ಸದಸ್ಯ ಕಾರ್ಯದರ್ಶಿಗಳು ಸಭೆಯಲ್ಲಿ ಹಾಜರಿದ್ದ ಮಾನ್ಯ ಅಧ್ಯಕ್ಷರಿಗೆ ವಾರ್ಡ್ ಸಮಿತಿ ಸದಸ್ಯರುಗಳಿಗೆ ಮತ್ತು ವಿವಿಧ ಇಲಾಖೆಯ ಅಧಿಕಾರಿಗಳಿಗೆ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
ವಾರ್ಡ್ ಸಮಿತಿ

ನೋಡಲ್ ಅಧಿಕಾರಿಗಳು
ವಾರ್ಡ್ ನಂ. 145

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

Scanned by CamScanner